ಆಂದೋಲನ ಶುಕ್ರವಾರ, 15 ಡಿಸೆಂಬರ್ 2023

# ಸಾಮಾಜಿಕ ಜಾಲತಾಣಗಳ ಬಗ್ಗೆ ಎಚ್ಚರ ವಹಿಸಿ: ಎಸ್‌ಪಿ

## ಅಪರಾಧ ತಡೆ ಮಾಸಾಚರಣೆ ಹಾಗೂ ಜಾಗೃತಿ ಅಭಿಯಾನದಲ್ಲಿ ಸೀಮಾ ಲಾಟ್ಕರ್ ಕಿವಿಮಾತು

ಮೈಸೂರು: ಭಾರತದ ಭವಿಷ್ಯತ್ತಿನ ಪ್ರಜೆಗಳಾಗಿರುವ ಇಂದಿನ ವಿದ್ಯಾರ್ಥಿ ಸಮೂಹ ಈ ನೆಲದ ಕಾನೂನನ್ನು ಗೌರವಿಸಬೇಕು. ಸಾಮಾಜಿಕ ಜಾಲ ತಾಣಗಳ ಬಳಕೆಯ ಬಗ್ಗೆ ಎಚ್ಚರವಾಗಿರಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್ ತಿಳಿಸಿದರು.



ನಗರದ ಮೈಸೂರು-ಬನ್ನೂರು ರಸ್ತೆಯಲ್ಲಿರುವ ಎಟಿಎಂಇ ಕಾಲೇಜಿನಲ್ಲಿ ಎನ್‌ಎಸ್‌ಎಸ್ ಘಟಕ, ಕಾಲೇಜು ಆಂತರಿಕ ದೂರು ಸ್ವೀಕಾರ ಸಮಿತಿ (ಸಿಐಸಿಸಿ) ಹಾಗೂ ಮೈಸೂರು ಜಿಲ್ಲಾ ಪೊಲೀಸ್ ಸಹಯೋಗದಲ್ಲಿ ಆಯೋಜಿಸಿದ್ದ 'ಅಪರಾಧ ತಡೆ ಮಾಸಾಚರಣೆ ಹಾಗೂ ಜಾಗೃತಿ ಅಭಿಯಾನ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಯಾವುದೇ ವೈಯಕ್ತಿಕ ಮಾಹಿತಿಗಳನ್ನು, ಕುಟುಂಬದವರ ಭಾವ ಚಿತ್ರಗಳನ್ನು ಸಾಮಾಜಿಕ ಜಾಲತಾಣಗಳ ಮೂಲಕ ಹಂಚಿಕೊಳ್ಳಬಾರದು. ಇವುಗಳನ್ನು ಕಿಡಿಗೇಡಿಗಳು ಅಪರಾಧ ಚಟುವಟಿಕೆಗಳಿಗೆ ಬಳಸಿಕೊಳ್ಳುವ ಸಾಧ್ಯತೆ ಹೆಚ್ಚು ಎಂದು ಹೇಳಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಂದಿನಿ ಮಾತನಾಡಿ, ವಿದ್ಯಾರ್ಥಿಗಳು ದ್ವಿಚಕ್ರ ವಾಹನ ಚಾಲನೆ ಮಾಡುವಾಗ ಹಿಂಬದಿಯ ಸವಾರರೂ ಸೇರಿದಂತೆ ಇಬ್ಬರೂ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಕೋವಿಡ್-19ರಲ್ಲಿ ಉಂಟಾದ ಸಾವು-ನೋವುಗಳಿಗಿಂತ ಹೆಚ್ಚಾಗಿ ರಸ್ತೆ ಅಪಘಾತಗಳಲ್ಲಿ ಸಾವಿಗೀಡಾಗುತ್ತಿರುವ ಸಂಖ್ಯೆಯೇ ಅಂಕಿ-ಅಂಶಗಳ ಪ್ರಕಾರ ಅಧಿಕ ವಾಗಿದೆ. ಅಲ್ಲದೆ, ವಾಹನಗಳಿಗೆ ಸಂಬಂಧಿಸಿದ ನವೀಕರಿಸಿದ ವಾಹನ ವಿಮಾ ಪತ್ರ, ಚಾಲನಾ ಪರವಾನಗಿ ಸೇರಿದಂತೆ ಇತರೆ ಎಲ್ಲ ಅವಶ್ಯ ದಾಖಲಾತಿಗಳನ್ನು ಸರಿಯಾಗಿ ಇಟ್ಟು ಕೊಂಡಿರಬೇಕು ಎಂದು ಹೇಳಿದರು.

ಕಾರ್ಯಾಗಾರದಲ್ಲಿ ಮೈಸೂರು ದಕ್ಷಿಣ ಪೊಲೀಸ್ ಠಾಣೆಯ ವೃತ್ತ ನಿರೀಕ್ಷಕ ಶಿವಾನಂದಶೆಟ್ಟಿ, ವರುಣ ಠಾಣಾ ಉಪ ನಿರೀಕ್ಷಕ ಚೇತನ್ ಕಾನೂನು ಮತ್ತು ಅಪರಾಧಗಳ ಕುರಿತು ಮಾತನಾಡಿದರು. ಎಟಿ ಎಂಇ ಆಡಳಿತ ಮಂಡಳಿ ಕಾರ್ಯದರ್ಶಿ ಕೆ.ಶಿವಶಂಕರ್, ಪ್ರಾಂಶುಪಾಲ ಡಾ.ಎ.ಕೆ.ಮೂರ್ತಿ, ಐಕ್ಯೂಎಸಿ ನಿರ್ದೇಶಕ ಡಾ.ಎಲ್.ಬಸವರಾಜ್, ಆಡಳಿತಾಧಿಕಾರಿ ಡಾ.ಸಚ್ಚಿದಾನಂದ ಮೂರ್ತಿ, ಡೀನ್‌ಗಳಾದ ಡಾ.ಎಸ್ .ಆರ್.ಭಾಗ್ಯಶ್ರೀ, ಡಾ.ಎಂ.ಎಸ್. ಗೋವಿಂದೇ ಗೌಡ, ಸಿಐಸಿಸಿ ಸದಸ್ಯ ಚಂದ್ರಶೇಖರ್, ಎನ್‌ಎಸ್‌ಎಸ್ ಅಧಿಕಾರಿ ಎ.ಎನ್. ರುದ್ರೇಶ್, ಎಫ್.ಜಸ್ಲೀನ್ ಮತ್ತಿತರರು ಹಾಜರಿದ್ದರು.